# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1591
ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ
ಉತ್ತರಿಸುವ ದಿನಾಂಕ : 11-03-2022
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 10 ವರ್ಷಗಳಿಂದ ಕೆ.ಆರ್.ಇ.ಐ.ಎಸ್ ಸಹ ಶಿಕ್ಷಕರಿಗೆ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ನೀಡದಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ನಿಯಮಾವಳಿ ಪ್ರಕಾರ ಶಿಕ್ಷಕರುಗಳಿಗೆ 50:50 ರಂತೆ ಸಹ ಶಿಕ್ಷಕರುಗಳ ವೃಂದದಿಂದ ಪ್ರಾಂಶುಪಾಲರ ಹುದ್ದೆಗೆ ಬಡ್ತಿ ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಶಿಕ್ಷಕರುಗಳು ಮಾನ್ಯ ಉಚ್ಚ ನ್ಯಾಯಾಲಯ, ಧಾರವಾಡ ಪೀಠ ಇಲ್ಲಿ ರಿಟ್ ಪಿಟಿಷನ್ ಸಂಖ್ಯೆ: 107705-709/ 2018 & 108366-369/2018(EDN) ರಂತೆ ಪ್ರಕರಣ ದಾಖಲಿಸಿ ಸಹ ಶಿಕ್ಷಕರುಗಳಿಗೆ ಜಾರಿಯಲ್ಲಿರುವ ಶೇ.50:50ರ ಅನುಪಾತದಲ್ಲಿ ಪ್ರಾಂಶುಪಾಲರ ಹುದ್ದೆಗೆ ಭರ್ತಿ ಮಾಡುವುದರ ಬದಲಾಗಿ ಶೇ 75:25 (ಬಡ್ತಿ:ನೇರನೇಮಕಾತಿ) ಅನುಪಾತದಲ್ಲಿ ಭರ್ತಿ ಮಾಡಲು ಕೋರಿರುತ್ತಾರೆ.<br><br>ಸದರಿ ಪ್ರಕರಣವನ್ನು ಆಲಿಸಿದ ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ:25.01.2019ರಲ್ಲಿ ಆದೇಶ ನೀಡಿ, ಸಹ ಶಿಕ್ಷಕರುಗಳ ಹುದ್ದೆಯಿಂದ ಮುಂಬಡ್ತಿ ಮತ್ತು ನೇರ ನೇಮಕಾತಿಯನ್ನು ಶೇ.75:25 (ಬಡ್ತಿ: ನೇರನೇಮಕಾತಿ) ಅನುಪಾತದಲ್ಲಿ ಭರ್ತಿ ಮಾಡಲು ಆದೇಶಿಸಿದೆ.<br><br>ಅದರಂತೆ ಸರ್ಕಾರದ ಆದೇಶ ಸಂಖ್ಯೆ : ಸಕಇ 19 ಮೊದೇಶಾ 2019, ದಿನಾಂಕ: 22.07.2019ರಲ್ಲಿ ಸಹ ಶಿಕ್ಷಕರುಗಳ ವೃಂದದಿಂದ ಪ್ರಾಂಶುಪಾಲರ ಹುದ್ದೆಗೆ 75:25 (ಬಡ್ತಿ:ನೇರನೇಮಕಾತಿ) ಅನುಪಾತದಲ್ಲಿ ಭರ್ತಿ ಮಾಡಲು ಮತ್ತು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇಮಕಾತಿ ಸಮಗ್ರ ತಿದ್ದುಪಡಿಯಲ್ಲಿ ಸೇರ್ಪಡೆ ಮಾಡಿ ಮಂಜೂರಾತಿ ನೀಡಿ ಆದೇಶಿಸಲಾಗಿದೆ. ಅದರಂತೆ ಅಂತಿಮ ಜೇಷ್ಠತಾ ಪಟ್ಟಿಯನ್ನು ದಿನಾಂಕ: 13.11.2020 ರಂದು ಪ್ರಕಟಿಸಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ, ಬಡ್ತಿಯ ವಿಳಂಬಕ್ಕೆ ಕಾರಣಗಳೇನು; | |

| | | |
|---|---|---|
| | | ದಿನಾಂಕ 27.01.2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಹೈದರಾಬಾದ್-ಕರ್ನಾಟಕ ಮೀಸಲಾತಿ ಹಾಗೂ ರೋಸ್ಟರ್ ಮೀಸಲಾತಿಗೆ ಕುರಿತಂತೆ ಹೈದರಾಬಾದ್-ಕರ್ನಾಟಕ ವಿಶೇಷ ಕೋಶ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಕ್ರಮವಾಗಿ ಸ್ಪಷ್ಟ ಅಭಿಪ್ರಾಯ ಪಡೆದು ಶಿಕ್ಷಕರಿಗೆ ಮುಂಬಡ್ತಿ ನೀಡಲು ಕ್ರಮವಹಿಸಲು ತೀರ್ಮಾನಿಸಲಾಗಿರುತ್ತದೆ.<br><br>ಆದರಂತೆ ಹೈದರಾಬಾದ್-ಕರ್ನಾಟಕ ಮೀಸಲಾತಿ ಹಾಗೂ ರೋಸ್ಟರ್ ಮೀಸಲಾತಿಗೆ ಕುರಿತಂತೆ ಹೈದರಾಬಾದ್-ಕರ್ನಾಟಕ ವಿಶೇಷ ಕೋಶ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಸ್ಪಷ್ಟೀಕರಣ ಪಡೆಯಲಾಗಿರುತ್ತದೆ.<br><br>2011 ಮತ್ತು ನಂತರದ ವಿವಿಧ ಸರ್ಕಾರದ ಆದೇಶಗಳಲ್ಲಿ ಕಾಲಕಾಲಕ್ಕೆ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಿ ಆದೇಶಿಸಲಾಗಿರುತ್ತದೆ. ಸಂಘದ ಕೇಂದ್ರ ಕಛೇರಿ ಹಾಗೂ ವಸತಿ ಶಾಲೆ/ ಕಾಲೇಜುಗಳಿಗೆ 2011 ರ ನಂತರ ಮಂಜೂರಾಗಿರುವ ಹುದ್ದೆಗಳನ್ನು ಸೇರ್ಪಡೆಗೊಳಿಸಿ, ದಿನಾಂಕ 24.08.2021 ರಂದು ಕರ್ನಾಟಕ ರಾಜ್ಯ ಪತ್ರದಲ್ಲಿ ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರಕಟಿಸಲಾಗಿದೆ.<br><br>ಸದರಿ ಕರಡು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸ್ವೀಕೃತವಾಗಿರುವ ಆಕ್ಷೇಪಣೆಗಳನ್ನು ಪರಿಶೀಲಿಸಿ ದಿನಾಂಕ: 16.02.2022 ರಂದು ಅಂತಿಮ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರಕಟಿಸಲಾಗಿದೆ. ಈ ಹಿನ್ನೆಲೆಯಲ್ಲಿ ಬಡ್ತಿ ಪ್ರಕ್ರಿಯೆ ವಿಳಂಬವಾಗಿರುತ್ತದೆ. |
| ಇ) | ಪೂರ್ಣ ಪ್ರಮಾಣದ ಖಾಯಂ ಪ್ರಾಂಶುಪಾಲರುಗಳು ಇಲ್ಲದಿರುವ ಶಾಲೆಗಳ ಸಂಖ್ಯೆ ಎಷ್ಟು; | 490 ವಸತಿ ಶಾಲೆಗಳಲ್ಲಿ ಪೂರ್ಣ ಪ್ರಮಾಣದ ಖಾಯಂ ಪ್ರಾಂಶುಪಾಲರುಗಳು ಇರುವುದಿಲ್ಲ. |
| ಈ) | ಖಾಯಂ ಪ್ರಾಂಶುಪಾಲರು ಇಲ್ಲದೇ ಇರುವುದರಿಂದ ವಸತಿ ಶಾಲೆಗಳ ಆಡಳಿತಾತ್ಮಕ ಮತ್ತು ಶೈಕ್ಷಣಿಕವಾಗಿ ಅನಾನುಕೂಲತೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳಿಗೆ ಆಯಾ ವಸತಿ ಶಾಲೆಗಳಲ್ಲಿನ ಶಿಕ್ಷಕರನ್ನು ಜೇಷ್ಠತೆ ಆಧಾರದ ಮೇಲೆ ಪ್ರಾಂಶುಪಾಲರ ಹುದ್ದೆಗೆ ನಿಯೋಜಿಸಿದ್ದು, ಆಡಳಿತಾತ್ಮಕ ಮತ್ತು ಶೈಕ್ಷಣಿಕವಾಗಿ ಅನಾನುಕೂಲತೆ ಉಂಟಾಗದಂತೆ ನೋಡಿಕೊಳ್ಳಲಾಗುತ್ತಿದೆ. |

| | | |
|---|---|---|
| ಉ) | ಖಾಯಂ ಪ್ರಾಂಶುಪಾಲರ ನೇಮಕದಿಂದ ಸುಗಮ ಆಡಳಿತ ವ್ಯವಸ್ಥೆ ಸಾಗುವುದರಿಂದ ಯಾವ ಕಾಲಮಿತಿಯಲ್ಲಿ ಸಹ ಶಿಕ್ಷಕರಿಗೆ ಪ್ರಾಂಶುಪಾಲರ ಹುದ್ದೆಗಳಿಗೆ ಬಡ್ತಿ ನೀಡಲಾಗುವುದು? (ವಿವರಣೆಯೊಂದಿಗೆ ಮಾಹಿತಿ ಒದಗಿಸುವುದು) | ದಿನಾಂಕ:16.02.2022 ರಂದು ಸಂಘದ ವೃಂದ ಮತ್ತು ನೇಮಕಾತಿಗಳ ನಿಯಮಗಳ ತಿದ್ದುಪಡಿಗಳು 2021 ಪ್ರಕಟಿಸಿದ್ದು, ವೃಂದ ಮತ್ತು ನೇಮಕಾತಿಗಳ ನಿಯಮಗಳ ತಿದ್ದುಪಡಿಗಳನ್ವಯ ಸಹ ಶಿಕ್ಷಕರುಗಳಿಗೆ ಪ್ರಾಂಶುಪಾಲರ ಹುದ್ದೆಗಳಿಗೆ ಮುಂಬಡ್ತಿ ನೀಡುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಶೀಘ್ರದಲ್ಲಿ ಬಡ್ತಿ ನೀಡಲಾಗುವುದು. |

ಸಕಇ 150 ಮೊದೇಶಾ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು